C-886

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2020-21ನೇ ಸಾಲಿಗೆ ಸಿಪಿಎಸ್ ವ್ಯಾಸಂಗಕ್ಕೆ ನಿಯೋಜನೆಗೊಂಡಿರುವ ಸೇವಾನಿರತ ವೈದ್ಯರುಗಳಿಗೆ ಪ್ರತಿ ನಿಯೋಜನಾ ಸೌಲಭ್ಯ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಆಕುಕ 592 ಹೆಚ್ ಎಸ್ ಹೆಚ್ 2020, ದಿನಾಂಕ:17.11.2020.

2) ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರ ಸಂಖ್ಯೆ: ಬಿಇಸಿ/ಐಪಿಜಿ/215/2020-21, ದಿನಾಂಕ:17.03.2021.

Office of the Commissioner Health & FWS, B'lore
No. 16 APR 2021 Dt. ...

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರು ನಡೆಸಿದ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕೌನ್ಸಿಲಿಂಗ್ ಮೂಲಕ ಸೇವಾನಿರತ ಸ್ನಾತಕೋತ್ತರ ವ್ಯಾಸಂಗಕ್ಕಾಗಿ ಕಾಲೇಜು ಮತ್ತು ವಿಷಯವನ್ನು ಆಯ್ಕೆ ಮಾಡಿಕೊಂಡಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತೋರಿಸಲಾದ 16 ಮಂದಿ ವೈದ್ಯಾಧಿಕಾರಿಗಳ ಪೈಕಿ ಕ್ರ.ಸಂ:9,13 & 15ರ ವೈದ್ಯರುಗಳನ್ನು ಕರ್ನಾಟಕ ನಾಗರೀಕ ಸೇವೆ ನಿಯಮಗಳು 1958ರ ನಿಯಮ 61ರ ಪರಿಶಿಷ್ಟ 2ಎ ಕಂಡಿಕೆ-1ರನ್ವಯ, ಹಾಗೂ ಇನ್ನುಳಿದ ಕ್ರಮ ಸಂಖ್ಯೆಯ ವೈದ್ಯರುಗಳನ್ನು ಕೆ.ಸಿ.ಎಸ್.ಅರ್. ನಿಯಮ-61 ಪರಿಶಿಷ್ಟ-11ಎ 1 ರಲ್ಲಿನ ಐದು (5) ವರ್ಷಗಳು ಸೇವೆಯನ್ನು ಸಲ್ಲಿಸಿರಬೇಕೆಂಬ ಷರತ್ತನ್ನು ಸಡಿಲಿಸಿ, ಷರತ್ತು ಮತ್ತು ನಿಬಂಧನೆಗಳಿಗೆ ಒಳಪಡಿಸಿ ನಿಯೋಜಿಸಲಾಗಿತ್ತು. ನಿಯೋಜಿತ ವೈದ್ಯಾಧಿಕಾರಿಗಳು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಪರಿಶಿಷ್ಟ 2ಎ ರಲ್ಲಿ ತಿಳಿಸಿದಂತೆ ನಮೂನೆ-19ರ ಬಂಧ ಪತ್ರವನ್ನು ಸಲ್ಲಿಸುವ ಜೊತೆಗೆ ಪೆನಾಲ್ಟಿ ಬಾಂಡ್‌ನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಸೇವಾನಿರತವಾಗಿ ಸಿಪಿಎಸ್ ಸ್ನಾತಕೋತ್ತರ ವ್ಯಾಸಂಗಕ್ಕೆ ನಿಯೋಜಿತರಾದ 15 ವೈದ್ಯಾಧಿಕಾರಿಗಳು ಸದರಿ ಸಂಸ್ಥೆಗಳಲ್ಲಿ ವ್ಯಾಸಂಗಕ್ಕೆ ಹಾಜರಾಗಿರುವ ಬಗ್ಗೆ ಸಿ.ಟಿ.ಸಿ, ನಮೂನೆ-19 ಮತ್ತು 19ಎ ರಲ್ಲಿ ಕರಾರು ಬಂಧಪತ್ರ ಹಾಗೂ ಪೆನಾಲ್ಟಿ ಬಾಂಡ್ ಸಲ್ಲಿಸಿರುವುದರಿಂದ ಈ ಸೇವಾನಿರತ ವೈದ್ಯರುಗಳಿಗೆ ಸ್ನಾತಕೋತ್ತರ ವ್ಯಾಸಂಗದ ಅವಧಿಗೆ ಪ್ರತಿನಿಯೋಜನಾ ಸೌಲಭ್ಯವನ್ನು ಮಂಜೂರು ಮಾಡುವಂತೆ ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಅನುಬಂಧದಲ್ಲಿನ ಸದರಿ ವೈದ್ಯಾಧಿಕಾರಿಗಳು, ವ್ಯಾಸಂಗವನ್ನು ಮೊಟಕುಗೊಳಿಸಿದ್ದಲ್ಲಿ ಬಂಧಪತ್ರ ಷರತ್ತಿನಂತೆ ಅಂದಿನಿಂದ ಸದರಿ ಪ್ರತಿನಿಯೋಜನಾ ಸೌಲಭ್ಯವನ್ನು ಸ್ಥಗಿತಗೊಳಿಸುವ ಷರತ್ತಿಗೆ ಒಳಪಡಿಸಿ ವ್ಯಾಸಂಗದ ಅವಧಿಗೆ ಪ್ರತಿನಿಯೋಜನಾ ಸೌಲಭ್ಯಗಳನ್ನು ಮಂಜೂರು ಮಾಡಲು ಸರ್ಕಾರ ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 226 ಹೆಚ್‌ಎಸ್‌ಹೆಚ್ 2021.**

**ಬೆಂಗಳೂರು, ದಿನಾಂಕ:09-04-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ನಮೂದಿಸಲಾದ 15 ವೈದ್ಯಾಧಿಕಾರಿಗಳು ನಿಯೋಜಿತ ಸಂಸ್ಥೆಯಲ್ಲಿ ವ್ಯಾಸಂಗಕ್ಕೆ ಹಾಜರಾದ ದಿನಾಂಕದಿಂದ ವ್ಯಾಸಂಗವನ್ನು ಮುಂದುವರೆಸಿರುವ ಬಗ್ಗೆ ಸಂಬಂಧಿಸಿದ ಸಂಸ್ಥೆಯಿಂದ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಖಚಿತಪಡಿಸಿಕೊಂಡು ಸದರಿ

--2

Rd 19/4/2021

ವೈದ್ಯಾಧಿಕಾರಿಗಳು ವ್ಯಾಸಂಗದಲ್ಲಿ ಮುಂದುವರೆಯುವ ತನಕ ಮಾತ್ರ ಪ್ರತಿ ನಿಯೋಜನಾ ಸೌಲಭ್ಯವನ್ನು ಮಂಜೂರು ಮಾಡುವಂತೆ ಹಾಗೂ ಒಂದೊಮ್ಮೆ ಸದರಿ ವೈದ್ಯಾಧಿಕಾರಿಗಳು ವ್ಯಾಸಂಗವನ್ನು ಮೊಟಕುಗೊಳಿಸಿದ್ದಲ್ಲಿ ಅಂದಿನಿಂದ ಸದರಿ ಸೌಲಭ್ಯವನ್ನು ಸ್ಥಗಿತಗೊಳಿಸುವ ಷರತ್ತಿಗೆ ಒಳಪಡಿಸಿ ವ್ಯಾಸಂಗದ ಅವಧಿಗೆ ಮಾತ್ರ ಪ್ರತಿನಿಯೋಜನಾ ಸೌಲಭ್ಯಗಳನ್ನು ಮಂಜೂರು ಮಾಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 2 ಎಸ್.ಆರ್.ಎ 2008, ದಿನಾಂಕ: 05-06-2008ರಲ್ಲಿ ಸರ್ಕಾರದ ಇಲಾಖಾ ಕಾರ್ಯದರ್ಶಿಯವರಿಗೆ ನೀಡಲಾಗಿರುವ ಪ್ರತ್ಯಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಯ. ಶಿವಶಂಕರ್) 09/4/2021
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ /ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
4. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷೆಗಳ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
6. ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು.
7. ಸಂಬಂಧಪಟ್ಟ ವೈದ್ಯಕೀಯ ಕಾಲೇಜಿನ ಡೀನ್ ಮತ್ತು ನಿರ್ದೇಶಕರು/ಪ್ರಾಂಶುಪಾಲರು ಮತ್ತು ವೈದ್ಯಕೀಯ ಅಧೀಕ್ಷಕರು (ಇಲಾಖಾ ನಿರ್ದೇಶಕರ ಮುಖಾಂತರ)
8. ಸಂಬಂಧಪಟ್ಟ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು. (ಇಲಾಖಾ ನಿರ್ದೇಶಕರ ಮುಖಾಂತರ)
9. ಸಂಬಂಧಟ್ಟ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕರು. (ಇಲಾಖಾ ನಿರ್ದೇಶಕರ ಮುಖಾಂತರ)
10. ಸಂಬಂಧಪಟ್ಟ ವೈದ್ಯಾಧಿಕಾರಿಗಳು. (ಇಲಾಖಾ ನಿರ್ದೇಶಕರ ಮುಖಾಂತರ)
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ ರವರ ಆಪ್ತ ಶಾಖೆ, ಆ.ಕು.ಕ ಇಲಾಖೆ
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.